Akashvani: Bangalore
National Bulletin In Kannada
29.05.2026: 7.35AM
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
29.05.2026: 7.35AM

**ಮುಖ್ಯಾಂಶಗಳು :**

1. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದಿನಿಂದ ಕರ್ನಾಟಕ, ಗೋವಾ, ಕೇರಳಂ ಪ್ರವಾಸ; ಬೆಂಗಳೂರು, ದಾವಣಗೆರೆಗೆ ಇಂದು ಭೇಟಿ
2. ಬುಡಕಟ್ಟು ಭದ್ರತಾ ವೇದಿಕೆಯ ಪ್ರತಿನಿಧಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ; ಸಮುದಾಯದ ಸಬಲೀಕರಣದ ಕುರಿತು ಚರ್ಚೆ
3. ಭಯೋತ್ಪಾದನೆ ವಿರುದ್ಧ ನಿರ್ಣಾಯಕ ಕ್ರಮಕ್ಕೆ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಕರೆ
4. ಇಸ್ರೇಲ್‌ಗೆ ವಿಮಾನಯಾನ ಸೇವೆಗಳ ಅಮಾನತನ್ನು ಜುಲೈ ಅಂತ್ಯದವರೆಗೆ ವಿಸ್ತರಿಸಿದ ಏರ್ ಇಂಡಿಯಾ ಸಂಸ್ಥೆ
5. ಭಾರತ-ಇಂಗ್ಲೆಂಡ್ ಮಹಿಳಾ ಟಿ-೨೦ ಕ್ರಿಕೆಟ್ ಸರಣಿ; ಮೊದಲ ಪಂದ್ಯದಲ್ಲಿ ಭಾರತಕ್ಕೆ ೩೮ ರನ್‌ಗಳ ಜಯ

********

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದಿನಿಂದ ಇದೇ ೩೧ರವರೆಗೆ ಕರ್ನಾಟಕ, ಗೋವಾ ಮತ್ತು ಕೇರಳಂ ರಾಜ್ಯಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಬೆಂಗಳೂರಿಗೆ ಆಗಮಿಸಲಿರುವ ಅವರು, ಆರ್ಟ್ ಆಫ್ ಲೀವಿಂಗ್ ಫೌಂಡೇಷನ್‌ನ ೪೫ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಅವರು ದಾವಣಗೆರೆಯಲ್ಲಿ ಬಿಡಿಟಿ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದ ಅಮೃತ ಮಹೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ೩೦ರಂದು ಅವರು ಗೋವಾಗೆ ತೆರಳಿ, ಪಣಜಿಯಲ್ಲಿ ಗೋವಾ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಸಿಎಸ್‌ಐಆರ್ ರಾಷ್ಟ್ರೀಯ ಸಾಗರ ಶಾಸ್ತ್ರ ಸಂಸ್ಥೆಗೆ ಭೇಟಿ ನೀಡಲಿದ್ದಾರೆ. ಇದೇ ೩೧ ರಂದು ಉಪರಾಷ್ಟ್ರಪತಿಗಳು ಕರ್ನಾಟಕದ ಬೆಳ್ತಂಗಡಿಯಲ್ಲಿ ಸಿರಿ ಕೈಗಾರಿಕಾ ಪಾರ್ಕ್ ಉದ್ಘಾಟಿಸಲಿದ್ದು, ಬಳಿಕ ಶ್ರೀಕ್ಷೇತ್ರ ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ಅದೇ ದಿನ ಅವರು ಕೇರಳಂಗೆ ತೆರಳಿ ಕೊಟ್ಟಾಯಂನಲ್ಲಿ ಮಲಯಾಳಂ ದಿನ ಪತ್ರಿಕೆ ದೀಪಿಕಾದ ೧೪೦ನೇ ವಾರ್ಷಿಕೋತ್ಸವನ್ನು ಉದ್ಘಾಟಿಸಲಿದ್ದಾರೆ.

********

ಪ್ರಧಾನಿ ನರೇಂದ್ರ ಮೋದಿ ನಿನ್ನೆ ನವದೆಹಲಿಯಲ್ಲಿ ಬುಡಕಟ್ಟು ಭದ್ರತಾ ವೇದಿಕೆ ಪ್ರತಿನಿಧಿಗಳನ್ನು ಭೇಟಿಮಾಡಿ ಮಾತುಕತೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬುಡಕಟ್ಟು ಸಮುದಾಯದ ಏಳಿಗೆಗಾಗಿ ಪ್ರತಿನಿಧಿಗಳು ಹೊಂದಿರುವ ಸಮರ್ಪಣಾ ಭಾವದ ಕುರಿತು ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಭೇಟಿಯ ವೇಳೆ ಬುಡಕಟ್ಟು ಸಮುದಾಯಗಳ ಸರ್ವತೋಮುಖ ಅಭಿವೃದ್ಧಿ ಮತ್ತು ಸಬಲೀಕರಣಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಅರ್ಥಪೂರ್ಣ ಚರ್ಚೆಗಳನ್ನು ನಡೆಸಲಾಗಿದೆ ಎಂದು ತಿಳಿಸಿದರು.

********

ಭಯೋತ್ಪಾದನೆ ವಿರುದ್ಧ ನಿರ್ಣಾಯಕ ಕ್ರಮಕ್ಕೆ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಕರೆ ನೀಡಿದ್ದು, ಈ ಹೋರಾಟದಲ್ಲಿ ಯಾವುದೇ ರೀತಿಯ ದ್ವಿಮುಖ ನೀತಿ ಇರಬಾರದು ಎಂದು ಪ್ರತಿಪಾದಿಸಿದ್ದಾರೆ. ರಷ್ಯಾದಲ್ಲಿ ಆಯೋಜಿಸಲಾಗಿದ್ದ ಅಂತಾರಾಷ್ಟ್ರೀಯ ಭದ್ರತಾ ವೇದಿಕೆಯನ್ನುದ್ದೇಶಿಸಿ ಮಾತನಾಡಿದ ಅವರು, ಜವಾಬ್ದಾರಿಯುತ ರಾಷ್ಟ್ರಗಳು ತಮ್ಮ ಆಯ್ಕೆಗಳನ್ನು ಮರುಪರಿಶೀಲಿಸಬೇಕಿದ್ದು, ತಾವು ಭಯೋತ್ಪಾದನೆಯ ಪ್ರಾಯೋಜಕರನ್ನು ಬೆಂಬಲಿಸುತ್ತೇವೆಯೋ ಅಥವಾ ಅದರ ವಿರುದ್ಧ ಕಠಿಣ ಕ್ರಮದ ಮೂಲಕ ಹೋರಾಡುತ್ತೇವೆಯೋ ಎಂಬುದನ್ನು ನಿರ್ಧರಿಸಬೇಕು ಎಂದರು. ಮಾಸ್ಕೋದಲ್ಲಿ ಅಜಿತ್ ದೋವಲ್, ಮೊದಲ ಅಂತಾರಾಷ್ಟ್ರೀಯ ಭದ್ರತಾ ವೇದಿಕೆ ಹಾಗೂ ಭದ್ರತಾ ವಿಷಯಗಳ ಉನ್ನತ ಪ್ರತಿನಿಧಿಗಳ ೧೪ನೇ ಸಭೆಯಲ್ಲಿ ಪಾಲ್ಗೊಂಡಿದ್ದರು ಎಂದು ಮಾಸ್ಕೋದಲ್ಲಿರುವ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ. ಈ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಅಜಿತ್ ದೋವಲ್ ರಷ್ಯಾ ಭದ್ರತಾ ಸಮಿತಿಯ ಕಾರ್ಯದರ್ಶಿ ಸರ್ಗೇಯ್ ಶೋಯ್ಗು ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ವೇಳೆ ರಕ್ಷಣೆ, ಭದ್ರತೆ, ಇಂಧನ ಮತ್ತು

ವ್ಯಾಪಾರ ಆರ್ಥಿಕ ಸಂಬಂಧಗಳ ಕ್ಷೇತ್ರಗಳಲ್ಲಿ ಪ್ರಸ್ತುತವಿರುವ ಸಹಕಾರ ಮತ್ತು ಪ್ರಗತಿಯನ್ನು ಪರಾಮರ್ಶಿಸಲಗಿದೆ ಎಂದು ರಾಯಭಾರ ಕಚೇರಿ ತಿಳಿಸಿದೆ.

********

ಅಹಮದಾಬಾದ್‌ಮನಲ್ಲಿ ಆಯೋಜಿಸಲು ಉದ್ದೇಶಿಸಲಾಗಿರುವ ಕಾಮನ್‌ವೆಲ್ತ್ ಗೇಮ್ಸ್ ಮತ್ತು ಒಲಿಂಪಿಕ್ ಕ್ರೀಡಾಕೂಟದ ಪೂರ್ವ ಸಿದ್ಧತೆಗಳ ಪರಿಶೀಲನೆಗಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ನಿನ್ನೆ ಉನ್ನತ ಮಟ್ಟದ ಸಭೆ ನಡೆಸಿದರು. ಅಹಮದಾಬಾದ್‌ನಲ್ಲಿ ನಡೆದ ಈ ಸಭೆಯಲ್ಲಿ ಕೇಂದ್ರ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ, ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವ ಅಮಿತ್ ಶಾ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ಜಾಗತಿಕ ಮಟ್ಟದ ಕ್ರೀಡಾ ಮೂಲಸೌಕರ್ಯ ಮತ್ತು ಅತ್ಯಾಧುನಿಕ ತರಬೇತಿ ಸೌಲಭ್ಯಗಳನ್ನು ವಿಸ್ತರಿಸುತ್ತಿದೆ ಎಂದರು. ಅಂತಾರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿ ಕ್ರೀಡಾ ಸೌಲಭ್ಯ ಅಭಿವೃದ್ಧಿಪಡಿಸಲಾಗುತ್ತಿದ್ದು, ಇದಕ್ಕೆ ಪೂರಕವಾಗಿ ಪ್ರಗತಿಯಲ್ಲಿರುವ ಕ್ರೀಡಾ ಮೂಲಸೌಕರ್ಯ ಮತ್ತು ಸಂಬಂಧಿತ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಅಹಮದಾಬಾದ್ ನಗರ ೨೦೩೦ರ ಕಾಮನ್‌ವೆಲ್ತ್ ಗೇಮ್ಸ್‌ಗೆ ಆತಿಥ್ಯ ವಹಿಸಲು ಉತ್ಸುಕವಾಗಿದ್ದು, ೨೦೩೬ರ ಒಲಿಂಪಿಕ್ಸ್ ಕ್ರೀಡಾಕೂಟದ ಆತಿಥ್ಯಕ್ಕಾಗಿ ಈಗಾಗಲೇ ಅಧಿಕೃತವಾಗಿ ಬಿಡ್ ಸಲ್ಲಿಸಿದೆ.

********

ಪಶ್ಚಿಮ ಏಷ್ಯಾದಲ್ಲಿ ಮುಂದುವರಿದಿರುವ ಬಿಕ್ಕಟ್ಟು ಹಾಗೂ ಅನಿಶ್ಚಿತತೆಯ ಹಿನ್ನೆಲೆಯಲ್ಲಿ ಏರ್ ಇಂಡಿಯಾ ಸಂಸ್ಥೆ, ಇಸ್ರೇಲ್‌ಗೆ ವಿಮಾನಯಾನ ಸೇವೆಗಳ ಅಮಾನತನ್ನು ಜುಲೈ ಅಂತ್ಯದವರೆಗೆ ವಿಸ್ತರಿಸಿದೆ. ಈ ಹಿಂದೆ ಜೂನ್ ಅಂತ್ಯದವರೆಗೆ ಟೆಲ್ ಅವೀವ್ ಮತ್ತು ದೆಹಲಿ ಮಾರ್ಗದ ವಿಮಾನ ಸಂಚಾರವನ್ನು ಏರ್ ಇಂಡಿಯಾ ಸಂಸ್ಥೆ ಸ್ಥಗಿತಗೊಳಿಸಿದ್ದು, ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಅಮಾನತು ಅವಧಿಯನ್ನು ವಿಸ್ತರಿಸಿದೆ. ಪಶ್ಚಿಮ ಏಷ್ಯಾ ಸಂಘರ್ಷದ ಪರಿಣಾಮವಾಗಿ ವಿಮಾನಯಾನ ಸಂಸ್ಥೆಗಳು ದುಬಾರಿ ಇಂಧನ ಬೆಲೆ ಮತ್ತು ವೈಮಾನಿಕ ವಲಯದ ಮೇಲಿನ ನಿರ್ಬಂಧಗಳು ಸೇರಿದಂತೆ ಹಲವು ಸವಾಲುಗಳನ್ನು ಎದುರಿಸುತ್ತಿದ್ದು, ಇದು ಅವುಗಳ ಕಾರ್ಯಾಚರಣೆಯ ವೆಚ್ಚವನ್ನು ಗಣನೀಯವಾಗಿ ಹೆಚ್ಚಿಸಿದೆ.

********

ದಕ್ಷಿಣ ಇರಾನ್ ಮೇಲಿನ ಅಮೆರಿಕದ ಇತ್ತೀಚಿನ ವಾಯು ದಾಳಿಗಳಿಗೆ ಪ್ರತಿಯಾಗಿ ಪ್ರಾದೇಶಿಕ ಅಮೆರಿಕ ವಾಯುನೆಲೆಯನ್ನು ಗುರಿಯಾಗಿಸಿಕೊಂಡು, ದಾಳಿ ನಡೆಸಿರುವುದಾಗಿ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್‌ಕೋರ್ - ಐಆರ್‌ಜಿಸಿ ತಿಳಿಸಿದೆ. ಅಮೆರಿಕದ ಸೇನಾ ನೆಲೆ ಹೊಂದಿರುವ ಕುವೈತ್, ತನ್ನ ವಲಯಕ್ಕೆ ಬಂದ ಶತ್ರು ಕ್ಷಿಪಣಿ ಮತ್ತು ಡ್ರೋಣ್‌ಗಳನ್ನು ಹೊಡೆದುರುಳಿಸಿರುವುದಾಗಿ ಹೇಳಿದ್ದು, ದಾಳಿಯ ನಿಖರ ಗುರಿಯನ್ನು ಖಚಿತಪಡಿಸಿಲ್ಲ.

********

ಕೇಂದ್ರ ಮತ್ತು ಇತರ ಪಾಲುದಾರ ವಿಶ್ವವಿದ್ಯಾಲಯಗಳ ಪದವಿ ಕೋರ್ಸ್‌ಗಳ ಪ್ರವೇಶಾತಿಗಾಗಿ ನಡೆಯುವ ಸಾಮಾನ್ಯ ವಿಶ್ವವಿದ್ಯಾಲಯ ಪ್ರವೇಶ ಪರೀಕ್ಷೆ - ಸಿಯುಇಟಿ-ಯುಜಿ-೨೦೨೬ರ ಪರಿಷ್ಕೃತ ಪರೀಕ್ಷಾ ವೇಳಾಪಟ್ಟಿ ಮತ್ತು ಪ್ರವೇಶ ಪತ್ರಗಳನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಬಿಡುಗಡೆ ಮಾಡಿದೆ. ಈ ಪರೀಕ್ಷೆಗಳು ಇದೇ ೩೧ರಂದು ಹಾಗೂ ಮುಂದಿನ ತಿಂಗಳ ೬ ಮತ್ತು ೭ರಂದು ನಡೆಯಲಿದೆ. ನಿನ್ನೆ ನಡೆಯಬೇಕಿದ್ದ ಈ ಪರೀಕ್ಷೆಯನ್ನು ಈದ್ ಉಲ್ ಅಝಾ ಹಬ್ಬದ ಹಿನ್ನೆಲೆಯಲ್ಲಿ ಮುಂದೂಡಲಾಗಿತ್ತು. ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರಗಳನ್ನು ಎನ್‌ಟಿಎ ಅಧಿಕೃತ ಜಾಲತಾಣ cuet.nta.nic.in ಮೂಲಕ ಪಡೆಯಬಹುದಾಗಿದೆ ಎಂದು ಸಂಸ್ಥೆ ತಿಳಿಸಿದೆ.

********

ಕೇಂದ್ರ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯಾ ಇಂದಿನಿಂದ ಮೇಘಾಲಯಕ್ಕೆ ಮೂರು ದಿನಗಳ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ಯುವ ವ್ಯವಹಾರಗಳು, ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳ ಪರಿಶೀಲನೆಗೆ ಸಂಬಂಧಿಸಿದ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಯುವ ವ್ಯವಹಾರಗಳ ಇಲಾಖೆಯ ವಿಚಾರ ಸಂಕಿರಣ ಸಭೆಯಲ್ಲೂ ಅವರು ಪಾಲ್ಗೊಳ್ಳಲಿದ್ದಾರೆ.ನಾಳೆ ಮುಖ್ಯಮಂತ್ರಿ ಕಾನ್ರಾಡ್ ಕೆ ಸಂಗ್ಮಾ ಅವರೊಂದಿಗೆ ರಾಜ್ಯದ ರಾಜಧಾನಿಯಲ್ಲಿ ೧೩೨.೯ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಸಂಯೋಜಿತ ಬಹುಪಯೋಗಿ ಒಳಾಂಗಣ ಕ್ರೀಡಾ ಸಂಕೀರ್ಣವನ್ನು ಉದ್ಘಾಟಿಸಲಿದ್ದಾರೆ.ಈ ಭೇಟಿಯ

ಸಮಯದಲ್ಲಿ, ಭಾರತೀಯ ಒಲಿಂಪಿಕ್ ಅಸೋಸಿಯೇಷನ್‌ನ ಪ್ರತಿನಿಧಿಗಳು ಮತ್ತು ಇತರ ಗಣ್ಯರ ಸಮ್ಮುಖದಲ್ಲಿ ಮೇಘಾಲಯದೊಂದಿಗೆ ೩೯ನೇ ರಾಷ್ಟ್ರೀಯ ಕ್ರೀಡಾಕೂಟ ೨೦೨೬ರ ಆತಿಥೇಯ ರಾಜ್ಯದ ಒಪ್ಪಂದಕ್ಕೆ ಸಹಿ ಹಾಕಲಾಗುವ ನಿರೀಕ್ಷೆ ಇದೆ.

********

ಲಂಡನ್‌ನ ಚೆಲ್ಮ್ಸ್‌ಫೋರ್ಡ್‌ನಲ್ಲಿ ನಿನ್ನೆ ನಡೆದ ಮೂರು ಪಂದ್ಯಗಳ ಮಹಿಳಾ ಟಿ-೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತದ ವನಿತೆಯರ ತಂಡ ಇಂಗ್ಲೆಂಡ್ ತಂಡವನ್ನು ೩೮ ರನ್‌ಗಳಿಂದ ಮಣಿಸಿ, ಸರಣಿಯಲ್ಲಿ ಮುನ್ನಡೆ ಕಾಯ್ದುಕೊಳ್ಳುವಲ್ಲಿ ಸಫಲವಾಗಿದೆ. ಭಾರತ ನೀಡಿದ ೧೮೯ ರನ್‌ಗಳ ಗುರಿಯನ್ನು ಬೆನ್ನತ್ತಿದ ಇಂಗ್ಲೆಂಡ್, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೫೦ ರನ್ ಗಳಿಸಲಷ್ಟೇ ಶಕ್ತವಾಯಿತು. ಸರಣಿಯ ಎರಡನೇ ಪಂದ್ಯ ಬ್ರಿಸ್ಟಲ್‌ನಲ್ಲಿ ನಾಳೆ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ನಡೆಯಲಿದೆ.

********

ಮಾರ್ಚ್ ೨೮ರಿಂದ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ ಅಂತಿಮ ಘಟ್ಟ ತಲುಪುತ್ತಿದ್ದು, ಇಂದು ನಡೆಯಲಿರುವ ಎರಡನೇ ಕ್ವಾಲಿಫೈಯರ್‌ನ ಪ್ರಮುಖ ಹಣಾಹಣಿಯಲ್ಲಿ ಗುಜರಾತ್ ಟೈಟನ್ಸ್ ಹಾಗೂ ರಾಜಸ್ತಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಫೈನಲ್‌ಗೇರುವ ಮತ್ತೊಂದು ಅವಕಾಶವಾಗಿ ಗುಜರಾತ್ ಟೈಟನ್ಸ್, ಮೊದಲನೇ ಕ್ವಾಲಿಫೈಯರ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ದ ಸೋತು, ಈ ಪಂದ್ಯದ ಮೂಲಕ ಫೈನಲ್‌ಗೇರುವ ತವಕದಲ್ಲಿದ್ದರೆ, ಎಲಿಮಿನೇಟರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು ಮಣಿಸಿ, ಗೆಲುವಿನ ಭರವಸೆಯೊಂದಿಗೆ ರಾಜಸ್ತಾನ್ ರಾಯಲ್ಸ್ ತಂಡ ಕಣಕ್ಕಿಳಿಯುತ್ತಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ ಇದೇ ೩೧ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಫೈನಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಐಪಿಎಲ್-೨೦೨೬ ಟ್ರೋಫಿಗಾಗಿ ಸೆಣಸಾಟ ನಡೆಸಲಿದೆ.

********

ಹಾಂಕಾಂಗ್‌ನಲ್ಲಿ ನಿನ್ನೆ ಆರಂಭವಾದ ೨೦ ವರ್ಷದೊಳಗಿನವರ 'ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್'ನ ಮೊದಲ ದಿನವೇ ಭಾರತದ ಯುವ ಓಟಗಾರ್ತಿ ನಿಪಮ್, ೧೦೦ ಮೀಟರ್ ಓಟದ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದಿದ್ದಾರೆ. ಮಹಿಳೆಯರ ೧೦೦ ಮೀಟರ್ ಓಟದ ೨೦ ವರ್ಷದೊಳಗಿನವರ ವಿಭಾಗದಲ್ಲಿ ರಾಷ್ಟ್ರೀಯ ದಾಖಲೆ ಹೊಂದಿರುವ ೧೮ ವರ್ಷದ ನಿಪಮ್, ನಿಗದಿಪಡಿಸಿದ ದೂರವನ್ನು ೧೧.೬೨ ಸೆಕೆಂಡುಗಳಲ್ಲಿ ಪೂರ್ಣಗೊಳಿಸಿ ಮೂರನೇ ಸ್ಥಾನದೊಂದಿಗೆ ಕಂಚಿನ ಪದಕಕ್ಕೆ ಕೊರಳೊಡ್ಡಿದರು.

********

ಭಾರತೀಯ ಜನತಾ ಪಕ್ಷ - ಬಿಜೆಪಿ ಪಂಜಾಬ್, ಹರಿಯಾಣ, ದೆಹಲಿ ಮತ್ತು ತ್ರಿಪುರಾ ರಾಜ್ಯಗಳಿಗೆ ಹೊಸ ಪಕ್ಷದ ಅಧ್ಯಕ್ಷರನ್ನು ನೇಮಕ ಮಾಡಿದೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ಪೂರ್ವ ದೆಹಲಿ ಸಂಸದ ಹಾಗೂ ಕೇಂದ್ರ ಸಚಿವ ಹರ್ಷ್ ಮಲ್ಹೋತ್ರಾ ಅವರನ್ನು ಪಕ್ಷದ ದೆಹಲಿ ಘಟಕದ ಅಧ್ಯಕ್ಷರನ್ನಾಗಿ ನೇಮಿಸಿದ್ದಾರೆ. ಹರಿಯಾಣದ ಬಿಜೆಪಿ ಅಧ್ಯಕ್ಷರಾಗಿ ಡಾ. ಅರ್ಚನಾ ಗುಪ್ತಾ ಮತ್ತು ಪಂಜಾಬ್ ಬಿಜೆಪಿಯ ನೂತನ ಅಧ್ಯಕ್ಷರಾಗಿ ಕೇವಲ್ ಸಿಂಗ್ ಧಿಲ್ಲೋನ್ ಅವರನ್ನು ನೇಮಕ ಮಾಡಲಾಗಿದೆ. ಇದರ ಜೊತೆಗೆ ಅಭಿಷೇಕ್ ದೆಬ್ರಾಯ್ ಅವರನ್ನು ತ್ರಿಪುರಾ ಬಿಜೆಪಿಯ ನೂತನ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

****END****